# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 02.07.2011**

## ***ರಸ್ತೆ ನಾಮಕರಣ : ಸಾರ್ವಜನಿಕ ಆಕ್ಷೇಪಣೆಗೆ ಆಹ್ವಾನ***

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ನಂ.167ರ ವ್ಯಾಪ್ತಿಯಲ್ಲಿ ಬರುವ ಟಾಟಾ ಸಿಲ್ಕ್ ಫಾರಂ ಬಡಾವಣೆ, ಕೆ.ಆರ್. ರಸ್ತೆಯಲ್ಲಿರುವ ಕಂಠೀರವ ಗರಡಿ ಮನೆಯ ಮುಂಭಾಗದಲ್ಲಿರುವ ವೃತ್ತಕ್ಕೆ ***"ಶ್ರೀ. ಕುಬಳಪ್ಪ ವೃತ್ತ"*** ಎಂದು ನಾಮಕರಣ ಮಾಡಲು ದಿನಾಂಕ: 30.05.2011 ರಂದು ನಡೆದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯಲ್ಲಿ ನಿರ್ಣಯಿಸಲಾಗಿದೆ.

ಆದುದರಿಂದ ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಸಾರ್ವಜನಿಕ ಆಕ್ಷೇಪಣೆಗಳಿದ್ದಲ್ಲಿ ಈ ಪತ್ರಿಕಾ ಪ್ರಕಟಣೆ ಹೊರಡಿಸಲಾದ ದಿನಾಂಕದಿಂದ 30 ದಿನದೊಳಗೆ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ನರಸಿಂಹರಾಜ ಚೌಕ, ಬೆಂಗಳೂರು-02, ಇವರಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ತಿಳಿಸಲಾಗಿದೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 02.07.2011**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವತಿಯಿಂದ ರಾಜಕಾಲುವೆ ಒತ್ತುವರಿ ತೆರವು ಕಾರ್ಯಾಚರಣೆ ಮುಂದುವರೆಸಿದ್ದು, ದಿನಾಂಕ: 01.07.2011 ರಂದು ಯಲಹಂಕ ವಲಯದ ಕೊಡಿಗೇಹಳ್ಳಿ ಉಪ ವಿಭಾಗದ ವಾರ್ಡ್ ನಂ.8ರ ಟಾಟಾನಗರದಲ್ಲಿ ರಾಜಕಾಲುವೆ ಒತ್ತುವರಿ ತೆರವು ಕಾರ್ಯಾಚರಣೆಯನ್ನು ಕೈಗೊಳ್ಳಲಾಗಿತ್ತು ಎಂದು ಮುಖ್ಯ ಅಭಿಯಂತರರು (ಯಲಹಂಕ) ವಲಯ ರವರು ತಿಳಿಸಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**